**ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :**

ಅ) ಖಾಯಂಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಆ) ಕೆಲವು ಕಡೆ ಸಂಬಳ ಸರಿಯಾಗಿ ನೀಡುತ್ತಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಮೀಸಲಾತಿ ಪದ್ಧತಿ ಅನುಸರಿಸಲು ಸೂಚನೆ ನೀಡಲಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಅನುಸರಿಸಿರುವುದಿಲ್ಲವೆಂದು ತಿಳಿದು ಬಂದಿದೆ. ಇದನ್ನು ಸರಿ ಪಡಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆ.

**ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದಲ್ಲಿ ಹೊಸ ವಿದ್ಯಾರ್ಥಿ ನಿಲಯ ಪ್ರಾರಂಭಿಸುವುದು**

**889 (404) ಶ್ರೀ ಕುಮಾರ ಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ) :** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ಮತ್ತು ಹಿಂದುಳಿದ, ಅಲ್ಪಸಂಖ್ಯಾತ ವಿದ್ಯಾರ್ಥಿ/ ವಿದ್ಯಾರ್ಥಿನಿಯರ ನಿಲಯಗಳು ಎಷ್ಟಿವೆ (ವಿವರ ನೀಡುವುದು);

ಆ) ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಅಗತ್ಯಕ್ಕೆ ವಿದ್ಯಾರ್ಥಿ ನಿಲಯಗಳು ಇವೆಯೇ;

ಇ) ಶಿವಮೊಗ್ಗ ನಗರದಲ್ಲಿರುವ ವಿವಿಧ ವರ್ಗಗಳ ವಿದ್ಯಾರ್ಥಿ ನಿಲಯಗಳೆಷ್ಟು; ವಿದ್ಯಾರ್ಥಿಗಳಿಗೆ ತಕ್ಕಂತೆ ವಿದ್ಯಾರ್ಥಿನಿಲಯಗಳು ಇವೆಯೇ;

ಈ) ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ (ವಿವರ ನೀಡುವುದು)?

**ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :**

ಅ) ಶಿವಮೊಗ್ಗ ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಪರಿಶಿಷ್ಟ ಜಾತಿಯ ಆರು ಮೆಟ್ರಿಕ್ ಪೂರ್ವ ಎರಡು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ಐದು ಮೆಟ್ರಿಕ್ ಪೂರ್ವ ಹಾಗೂ ಒಂದು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಇರುತ್ತವೆ. ಪರಿಶಿಷ್ಟ ವರ್ಗಗಳ ವಿದ್ಯಾರ್ಥಿ ನಿಲಯಗಳು ಇರುವುದಿಲ್ಲ.

ಆ) ಹೌದು.

ಇ) ಶಿವಮೊಗ್ಗ ನಗರದಲ್ಲಿ ಪರಿಶಿಷ್ಟ ಜಾತಿಯ ಒಂದು ಮೆಟ್ರಿಕ್ ಪೂರ್ವ ಬಾಲಕ ಹಾಗೂ ಎರಡು ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಗಳು, ಮೆಟ್ರಿಕ್ ನಂತರದ ಮೂರು ಬಾಲಕ ಮೂರು ಬಾಲಕಿಯರ- ವಿದ್ಯಾರ್ಥಿ ನಿಲಯಗಳು ಇರುತ್ತವೆ. ಹಾಗೆಯೇ ಶಿವಮೊಗ್ಗ ನಗರದಲ್ಲಿ ಹಿಂದುಳಿದ ವರ್ಗಗಳ ಎರಡು ಮೆಟ್ರಿಕ್ ಪೂರ್ವ, ಆರು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳು ಇರುತ್ತವೆ. ಶಿವಮೊಗ್ಗ ನಗರದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಕೊರತೆ ಇದೆ. ಇಲ್ಲಿ ಪರಿಶಿಷ್ಟ ವರ್ಗಗಳ ಯಾವುದೇ ವಿದ್ಯಾರ್ಥಿ ನಿಲಯಗಳು ಇರುವುದಿಲ್ಲ.

ಈ) ಲಭ್ಯವಿರುವ ಅನುದಾನದ ಆಧಾರದ ಮೇಲೆ ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುತ್ತದೆ.

**ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉಪಯೋಜನೆ ಹಣ ಬಿಡುಗಡೆ**

**890 (1369) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ) :** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ಕಲ್ಯಾಣಕ್ಕಾಗಿ 2009–10 ರಲ್ಲಿ ನಿಗದಿಪಡಿಸಲಾದ ಅನುದಾನ ಎಷ್ಟು? ಬಿಡುಗಡೆಯಾದ ಅನುದಾನ ಎಷ್ಟು?

ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಉಪಯೋಜನೆ (ಎಸ್.ಸಿ.ಪಿ ಮತ್ತು ಟಿ.ಎಸ್.ಪಿ) ಯಲ್ಲಿ 2006 ರಿಂದ 2010ರ ವರೆಗೆ ನಿಗದಿಯಾದ ಅನುದಾನವೆಷ್ಟು?

ಇ) ಬಿಡುಗಡೆಯಾದ ಅನುದಾನವೆಷ್ಟು? ಖರ್ಚಾದ ಹಣವೆಷ್ಟು? ಉಳಿಕೆಯಾದ ಹಣವೆಷ್ಟು? ಮಾಹಿತಿ ನೀಡುವುದು?

**ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :**

ಅ) 2009–10ನೇ ಸಾಲಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ ಪರಿಶಿಷ್ಟ ಜಾತಿ ಉಪಯೋಜನೆಯಡಿ ರೂ.2916.59 ಕೋಟಿ ಹಾಗೂ ಗಿರಿಜನ ಉಪಯೋಜನೆಯಡಿ ರೂ.1144.05 ಕೋಟಿಗಳನ್ನು ನಿಗಧಿಪಡಿಸಲಾಗಿದೆ. ಫೆಬ್ರವರಿ 2010ರ ಅಂತ್ಯಕ್ಕೆ (ವಿವಿಧ ಅಭಿವೃದ್ಧಿ